ಬುಧವಾರ 13.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 23 Digital Varthe Kannada Daily Volume 01 - Issue 23 Wednesday 13.08.2025 Price: 5/- Rs 2 Pages Bangalore Rural

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ನೆಲಮಂಗಲ ತಹಸೀಲ್ದಾರ್ ಶೀತಲ್ ಒಂದೇ ತಿಂಗಳಿಗೆ ಎತ್ತಂಗಡಿ!

## ಶುಕ್ರವಾರದ ಬದಲಿಗೆ ಸೋಮವಾರ ಅಧಿಕಾರ ಸ್ವೀಕಾರವೇ ಮುಳುವು! ಮುಗಿಯಿತು ತಾಳಕ್ಕೆ ಕುಣಿಯದ

**ನೆಲಮಂಗಲ:** ಕೇವಲ ಒಂದು ತಿಂಗಳ ಹಿಂದೆಯಷ್ಟೆ ನೆಲಮಂಗಲ ತಾಲೂಕಿಗೆ ನೂತನ ತಹಸೀಲ್ದಾರ್ ಆಗಿ ಆಗಮಿಸಿದ್ದ ತಹಸೀಲ್ದಾರ್ ಶೀತಲ್ ಟಿ.ಎಸ್ ಅವರನ್ನು ವರ್ಗಾವಣೆ ಮಾಡುವಂತೆ ಘನ ಸರ್ಕಾರ ಆದೇಶ ಹೊರಡಿಸಿದೆ. ಕಳೆದ ಜುಲೈ 1 ರಂದು ಅಧಿಕಾರ ಸ್ವೀಕರಿಸಿದ ತಹಸೀಲ್ದಾರ್ ಅವರು ತಾಲೂಕಿಗೆ ಉತ್ತಮ ಆಡಳಿತ ನೀಡುವ ಭರವಸೆಯೊಂದಿಗೆ ತಾಲೂಕಿನ ಶ್ರೇಯೋಭಿವೃದ್ಧಿಗೆ ಶ್ರಮಿಸುವ ಉಮ್ಮಸ್ಸಿನಲ್ಲಿದ್ದರು. ಆದರೆ ತಹಸೀಲ್ದಾರ್ ತಾಲುಕ್ಕಿಗೆ ಕಾಲಿಟ್ಟ ಗಳಿಗೆ ಕಳೆದ 42 ದಿನಗಳ ಕಾಲ ಅವರನ್ನ ಬೆಂಬಿಡದೆ ಕಾಡಿದ್ದಂತೂ ಸತ್ಯ.



**ಅಧಿಕಾರ ಸ್ವೀಕಾರದ ದಿನವೇ ಮುಳುವು:** ಸಾಮಾನ್ಯವಾಗಿ ಶುಭ ಕಾರ್ಯಗಳಿಗೆ ಶುಕ್ರವಾರ ಆಯ್ಕೆ ಮಾಡಿಕೊಳ್ಳುವುದು ಸಹಜ, ಆದರೆ ಶುಕ್ರವಾರ ಬಿಟ್ಟು ಸೋಮವಾರ ತಾಲೂಕಿಗೆ ಆಗಮಿಸಿ ಅಧಿಕಾರ ಸ್ವೀಕಾರ ಮಾಡಿಕೊಂಡದ್ದೇ ತಹಸೀಲ್ದಾರ್ ಅವರಿಗೆ ಮುಳುವಾಯಿತು ಎಂದು ಕೆಲ ಕಾಲ ಜ್ಞಾನ ವಿಮರ್ಶಕರ ವಾದವಾಗಿದೆ.

**ಸಭೆಗೆ ಬಾರದ ಅಧಿಕಾರಿಗಳು:** ಇನ್ನು ತಹಶೀಲ್ದಾರ್ ಶೀತಲ್ ತಾಲೂಕು ಕಚೇರಿಯಲ್ಲಿ ಯಾವುದೇ ಸಭೆ ಕರೆದರೂ ಯಾರೊಬ್ಬ ಸರ್ಕಾರಿ ಅಧಿಕಾರಿಗಳು ಸಭೆಗೆ ಆಗಮಿಸುತ್ತಿರಲಿಲ್ಲ ಎನ್ನುವ ಗಂಭೀರ ಆರೋಪ ಕೇಳಿ ಬಂದಿದೆ. ಇತ್ತೀಚೆಗೆ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆ ನಿಗದಿಯಾಗಿದ್ದ ಕೆಲವೇ ಗಂಟೆಗಳಲ್ಲಿ ಮುಂದೂಡಲ್ಪಟ್ಟಿರುವುದು ಇದಕ್ಕೆ ಸ್ಪಷ್ಟ ನಿದರ್ಶನವಾಗಿದೆ. ತಾಲೂಕು ಆಡಳಿತ ರಾಜಕೀಯ ಕೇಂದ್ರವಾಗಿ ಮಾರ್ಪಡುತ್ತಿದೆ ಎಂದು ತಾಲೂಕು ಕಚೇರಿಯ ಕಿಟಕಿ ಬಾಗಿಲುಗಳು ಮಾತನಾಡುತ್ತಿವೆಯಂತೆ.

- ಕೇವಲ 42 ದಿನಗಳಲ್ಲಿ ನೆಲಮಂಗಲ ತಹಸೀಲ್ದಾರ್ ವರ್ಗಾವಣೆ
- ಅಧಿಕಾರ ಸ್ವೀಕಾರದ ದಿನದಿಂದಲೇ ಸವಾಲುಗಳ ಸರಮಾಲೆ
- ಸಭೆಗಳಿಗೆ ಗೈರು ಹಾಜರಾಗಿದ ಸರ್ಕಾರಿ ಅಧಿಕಾರಿಗಳ ಅಸಹಕಾರ
- ಸ್ವಾತಂತ್ರ್ಯ ದಿನ ಪೂರ್ವಭಾವಿ ಸಭೆ ಮುಂದೂಡಿಕೆ – ರಾಜಕೀಯ ಒತ್ತಡದ ಊಹೆ
- ಆಡಳಿತ ನ್ಯಾಯಮಂಡಳಿಯ ಮೊರೆ ಹೋಗುವ ಸಾಧ್ಯತೆ
- ಮುಂದಿನ ಅಧಿಕಾರಿಗಳಿಗೆ ಎಚ್ಚರಿಕೆಯ ಸಂಕೇತ

**ನ್ಯಾಯ ಮಂಡಳಿ ಮೊರೆ?**: ನೆಲಮಂಗಲಕ್ಕೆ ಬಂದು ಕೇವಲ 42 ದಿನಗಳಲ್ಲಿ ವರ್ಗಾವಣೆ ಹೊಂದಿರುವ ತಹಸೀಲ್ದಾರ್ ಶೀತಲ್ ಅವರು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಮೊರೆ ಹೋಗುವ ಸಾಧ್ಯತೆ ಇದೆ ಎಂದು ಮೂಲಗಳ ಪ್ರಕಾರ ತಿಳಿದು ಬಂದಿದ್ದು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಇಂದ ತಹಶೀಲ್ದಾರ್ ಶೀತಲ್ ಅವರಿಗೆ ನ್ಯಾಯ ಸಿಗುವುದ ಎಂಬುದು ಪ್ರಶ್ನೆಯಾಗಿದೆ.

**ಇದೊಂದು ಎಚ್ಚರಿಕೆ ಗಂಟೆ:** ತಹಶೀಲ್ದಾರ್ ಶೀತಲ್ ಅವರ ವರ್ಗಾವಣೆ ಮುಂದೆ ಬರುವ ಅಧಿಕಾರಿಗಳಿಗೆ ಒಂದು ಎಚ್ಚರಿಗೆ ಗಂಟೆಯಾಗಿದ್ದು ಸ್ವಲ್ಪ ಹಳಿ ತಪ್ಪಿದರು ಮುಂದೆ ಬರುವ ಅಧಿಕಾರಿಗಳಿಗೂ ಇದೆ ಶಿಕ್ಷೆ ಎದುರಾಗಲಿದೆ ಎನ್ನುವುದು ಗ್ಯಾರಂಟಿ.

**ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:9538786812 / 9880655634**

# ವೋಟ್ ಚೋರಿ: SIR ವಿರುದ್ಧ ಟಿ-ಶರ್ಟ್ ಪ್ರತಿಭಟನೆ




ನವದೆಹಲಿ: 'ವೋಟ್ ಚೋರಿ' ಮತ್ತು ಬಿಹಾರದಲ್ಲಿ ಚುನಾವಣಾ ಆಯೋಗದ ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆಯನ್ನು ವಿರೋಧಿಸಿ ಮಂಗಳವಾರ ಸಂಸತ್ ಭವನದ ಸಂಕೀರ್ಣದಲ್ಲಿ ಇಂಡಿಯಾ ಬ್ಲಾಕ್ ಪಕ್ಷಗಳ ಸಂಸದರು 'ಟಿ-ಶರ್ಟ್ ಪ್ರತಿಭಟನೆ' ನಡೆಸಿದರು. ಪ್ರತಿಪಕ್ಷಗಳು ಸಂಸದರು, ಬಿಹಾರ ಮತದಾರರ ಪಟ್ಟಿಯಲ್ಲಿದ್ದಾರೆ ಎನ್ನಲಾದ "124 ವರ್ಷ ವಯಸ್ಸಿನ ಮತದಾರ" ಮಹಿಳೆಯ ಹೆಸರು ಹೊಂದಿರುವ ಬಿಳಿ ಟಿ-ಶರ್ಟ್‌ಗಳನ್ನು ಧರಿಸಿ ಪ್ರತಿಭಟಿಸಿದರು.

## '124 ವರ್ಷದ ಮಹಿಳೆಯ' ಪೋಟೋ ಟೀಶರ್ಟ್ ಧರಿಸಿ ಪ್ರತಿಭಟನೆ

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ, ಟಿಎಂಸಿಯ ಡೆರೆಕ್ ಒ'ಬ್ರೇನ್, ಡಿಎಂಕೆಯ ಟಿಆರ್ ಬಾಲು, ಎನ್‌ಸಿಪಿ(ಎಸ್‌ಪಿ)ಯ ಸುಪ್ರಿಯಾ ಸುಳೆ, ಹಾಗೆಯೇ ಡಿಎಂಕೆ ಮತ್ತು ಎಡ ಪಕ್ಷಗಳ ಇತರ ವಿರೋಧ ಪಕ್ಷದ ಸಂಸದರು ಸಂಸತ್ತಿನ ಮಕರ ದ್ವಾರದ ಬಳಿ ಜಮಾಯಿಸಿ, SIR ವಿರುದ್ಧ ಪ್ರತಿಭಟಿಸಿದರು.

ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಪ್ರಕ್ರಿಯೆಯನ್ನು ಹಿಂಪಡೆಯುವಂತೆ ಒತ್ತಾಯಿಸಿ, ಪೋಸ್ಟರ್‌ಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು. ಇದು ಪ್ರತಿಭಟನೆಯ 15ನೇ ದಿನವಾಗಿದ್ದು, ಪ್ರತಿಭಟನಾ ನಿರತ ಸಂಸದರ ಮುಂದೆ "ನಮ್ಮ ಮತ. ನಮ್ಮ ಹಕ್ಕು. ನಮ್ಮ ಹೋರಾಟ" ಎಂದು ಬರೆದ ಬ್ಯಾನರ್ ಹಿಡಿದು ಚುನಾವಣಾ ಆಯೋಗದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರಿಯಾಂಕಾ ಗಾಂಧಿ ಸೇರಿದಂತೆ ಹಲವಾರು ಸಂಸದರು 'ಮಿಂಟಾ ದೇವಿ' ಮತ್ತು ಅವರ ಫೋಟೋ ಇರುವ ಬಿಳಿ ಟಿ-ಶರ್ಟ್‌ಗಳನ್ನು ಧರಿಸಿ, ಹಿಂಭಾಗದಲ್ಲಿ '124 ನಾಟ್ ಔಟ್' ಎಂದು ಬರೆಯಲಾಗಿದೆ. ರಾಜೀವ್ ಕುಮಾರ್ ಮತ್ತು ಜ್ಞಾನೇಶ್ ಕುಮಾರ್ ನೇತೃತ್ವದ ಚುನಾವಣಾ ಆಯೋಗವು ಬಿಜೆಪಿಯ ಇಲಾಖೆಯಾಗಿದೆ ಎಂದು ಕಾಂಗ್ರೆಸ್‌ನ ಮಾಣಿಕಮ್ ಟ್ಯಾಗೋರ್ ಆರೋಪಿಸಿದರು.

"ಮಿಂಟಾ ದೇವಿ ಮೊದಲ ಬಾರಿಗೆ ಮತ ಚಲಾಯಿಸುವವರು ಮತ್ತು ಅವರಿಗೆ 124 ವರ್ಷ ವರ್ಷವಾಗಿದೆ. ಮತದಾರರ ಪಟ್ಟಿಯಲ್ಲಿ ಅವರ ಹೆಸರು ಮೊದಲ ಬಾರಿಗೆ ಮತ ಚಲಾಯಿಸುತ್ತದೆ. ಅಂತಹ ವಿಷಯಗಳ ಕುರಿತು ನಾವು ಚರ್ಚೆಯನ್ನು ಬಯಸುತ್ತಿದ್ದೇವೆ" ಎಂದು ಕಾಂಗ್ರೆಸ್ ನಾಯಕ ಹೇಳಿದರು.

## ನಟ ದರ್ಶನ್ ಕೋರ್ಟ್ ಗೆ ಹಾಜರು, ವಿಚಾರಣೆ ಸೆಪ್ಟೆಂಬರ್ 9ಕ್ಕೆ ಮುಂದೂಡಿಕೆ

ಚಿತ್ರದುರ್ಗ ಮೂಲದ ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಇಂದು ದರ್ಶನ್, ಪವಿತ್ರಾ, ಗೌಡ ಹಾಗೂ ಇತರರನ್ನು 64ನೇ ಸೆಷನ್ಸ್ ಕೋರ್ಟ್‌ನಲ್ಲಿ ವಿಚಾರಣೆ ನಡೆಸಲಾಗಿದೆ. ಆದರೆ ಕೇಸಿನಲ್ಲಿ ಎ10 ವಿನಯ್ , ಎ15 ,ಕಾರ್ತಿಕ್ ಹಾಗೂ ಎ 16 ಕೇಶವಮೂರ್ತಿ ಮತ್ತು ಎ17 ನಿಖಿಲ್ ಕೋರ್ಟ್‌ಗೆ ಹಾಜಾರಾಗಿಲ್ಲ ಹೀಗಾಗಿ, ಸೆಪ್ಟೆಂಬರ್9 ಕ್ಕೆ ಮುಂದಿನ ದಿನಾಂಕ ವಿಚಾರಣೆಯನ್ನು ನಿಗದಿಪಡಿಸಲಾಗಿದೆ.

ಆ ದಿನ ಪ್ರಕರಣದ ಎಲ್ಲಾ ಆರೋಪಿಗಳು ಕಡ್ಡಾಯವಾಗಿ ಹಾಜರು ಇರಬೇಕು ಎಂದು ನಿರ್ದೇಶಿಸಿದೆ.ಹೈಕೋರ್ಟ್ ಜಾಮೀನು ಆದೇಶ ರೀತಿಯ ಬಗ್ಗೆ ಆಕ್ಷೇಪಿಸಿದ್ದ ನ್ಯಾಯಪೀಠ ಲಿಖಿತ ವಾದಮಂಡನೆಗಳನ್ನು ಸಲ್ಲಿಸುವಂತೆ ಎರಡೂ ಕಡೆ ವಕೀಲರಿಗೆ ಸೂಚಿಸಿತ್ತು. ದರ್ಶನ್ ವಿರುದ್ಧದ ಹಳೆಯ ಕೇಸ್ ಗಳ ಬಗ್ಗೆಯೂ ದಾಖಲೆ ಸಲ್ಲಿಕೆ ಮಾಡುವಂತೆ ಕೇಳಿತ್ತು. ಪ್ರಾಸಿಕ್ಯೂಷನ್ ಪರ ವಕೀಲರಿಂದ ಸುಪ್ರೀಂಕೋರ್ಟ್ ಗೆ ಸಲ್ಲಿಕೆಯಾಗಿದೆ.

# ಅಭಿ ಪಿಕ್ಚರ್ ಬಾಕಿ ಹೈ:

## EC ವಿರುದ್ಧ ರಾಹುಲ್ ಗಾಂಧಿ ವಾಗ್ದಾಳಿ



ನವದೆಹಲಿ: 'ಒಬ್ಬ ವ್ಯಕ್ತಿ, ಒಂದು ಮತ' ತತ್ವವನ್ನು ಜಾರಿಗೊಳಿಸುವ ಕರ್ತವ್ಯವನ್ನು ಚುನಾವಣಾ ಆಯೋಗ ನಿರ್ವಹಿಸುತ್ತಿಲ್ಲ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ. ಮತದಾರರ ಪಟ್ಟಿಯಲ್ಲಿ ಅಕ್ರಮಗಳ ಕುರಿತು ಮತ್ತೆ ಆರೋಪಿಸಿರುವ ಲೋಕಸಭೆ ವಿರೋಧ ಪಕ್ಷ ನಾಯಕ "ಅಭಿ ಪಿಕ್ಚರ್ ಬಾಕಿ ಹೈ" ಎಂದು ಹೇಳಿದ್ದಾರೆ. ಕಾಂಗ್ರೆಸ್ ಪಕ್ಷವು ಸಂವಿಧಾನವನ್ನು ರಕ್ಷಿಸುವಲ್ಲಿ ತೊಡಗಿಸಿಕೊಂಡಿದೆ ಆ ಕೆಲಸವನ್ನು ಮುಂದುವರಿಸುತ್ತದೆ ಎಂದರು. 'ಮತ ಕಳ್ಳತನ ಕೇವಲ ಒಂದು ಕ್ಷೇತ್ರದಲ್ಲಿ ಆಗಿದ್ದಲ್ಲ. ಹಲವು ಕಡೆ ಆಗಿದೆ. ಇದನ್ನು ರಾಷ್ಟ್ರೀಯ ಮಟ್ಟದಲ್ಲಿ ವ್ಯವಸ್ಥಿತವಾಗಿ ಮಾಡಲಾಗುತ್ತಿದೆ. ಚುನಾವಣಾ ಆಯೋಗಕ್ಕೆ ಇದು ತಿಳಿದಿದೆ ಎಂದು ನಮಗೂ ತಿಳಿದಿದೆ ಎಂದು ಇಂದು ಸಂಸತ್ ಭವನದ ಸಂಕೀರ್ಣದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಮೊದಲು, ನಮ್ಮಲ್ಲಿ ಸಾಕ್ಷಿಗಳು ಇರಲಿಲ್ಲ ಆದರೆ ಈಗ ಇದೆ. ನಾವು ಸಂವಿಧಾನವನ್ನು ರಕ್ಷಿಸುತ್ತೇವೆ. 'ಒಬ್ಬ ವ್ಯಕ್ತಿ, ಒಂದು ಮತ' ಸಂವಿಧಾನದ ಅಡಿಪಾಯವಾಗಿದೆ" ಎಂದು ನಮ್ಮ ಹೋರಾಟ ಮುಂದುವರಿಸುತ್ತೇವೆ ಎಂದರು. 'ಒಬ್ಬ ವ್ಯಕ್ತಿ, ಒಂದು ಮತ'ವನ್ನು ಜಾರಿಗೊಳಿಸುವುದು ಚುನಾವಣಾ ಆಯೋಗದ ಕರ್ತವ್ಯ.ಆದರೆ ಅವರು ತಮ್ಮ ಕರ್ತವ್ಯವನ್ನು ಮಾಡಿಲ್ಲ. ಆದ್ದರಿಂದ ನಾವು ಸಂವಿಧಾನವನ್ನು ರಕ್ಷಿಸುತ್ತಿದ್ದೇವೆ ಮತ್ತು ಅದನ್ನು ಮುಂದುವರಿಸುತ್ತೇವೆ.ಅದನ್ನು ನಾವು ನಿಲ್ಲಿಸುವುದಿಲ್ಲ ಎಂದರು.

ಬಿಹಾರ ಚುನಾವಣಾ ಆಯೋಗದ ಮತದಾರರ ಪಟ್ಟಿಯಲ್ಲಿ ಪಟ್ಟಿ ಮಾಡಲಾಗಿದೆ ಎನ್ನಲಾದ 124 ವರ್ಷದ ಮತದಾರ ಮಿಂಟಾ ದೇವಿ ಬಗ್ಗೆ ಕೇಳಿದಾಗ, ಅಂತಹ ಸಾಕಷ್ಟು ಪ್ರಕರಣಗಳಿವೆ. ಅಭಿ ಪಿಕ್ಚರ್ ಬಾಕಿ ಹೈ ಎಂದರು. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಸಹ ಇಂತಹ ಹಲವಾರು ಪ್ರಕರಣಗಳಲ್ಲಿ ಸಂಬಂಧಿಕರ ವಿಳಾಸಗಳು ಮತ್ತು ಹೆಸರುಗಳು ನಕಲಿ ಇದೆ ಎಂದು ಹೇಳಿದ್ದಾರೆ.

**ಸಂಸತ್ ಆವರಣದಲ್ಲಿ ಪ್ರತಿಭಟನೆ:** ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ, ಪ್ರಿಯಾಂಕಾ ಗಾಂಧಿ, ಟಿಎಂಸಿಯ ಡೆರೆಕ್ ಒ'ಬ್ರೇನ್, ಡಿಎಂಕೆಯ ಟಿಆರ್ ಬಾಲು, ಎನ್‌ಸಿಪಿ (ಎಸ್‌ಪಿ) ಯ ಸುಪ್ರಿಯಾ ಸುಳೆ, ಹಾಗೆಯೇ ಡಿಎಂಕೆ ಮತ್ತು ಎಡ ಪಕ್ಷಗಳ ಇತರ ವಿರೋಧ ಪಕ್ಷದ ಸಂಸದರು ಸಂಸತ್ತಿನ ಮಕರ ದ್ವಾರದ ಬಳಿ ಪ್ರತಿಭಟನೆ ನಡೆಸಿದರು.

ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ಹಿಂಪಡೆಯುವಂತೆ ಒತ್ತಾಯಿಸಿ ಪೋಸ್ಟರ್‌ಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು. ರಾಜೀವ್ ಕುಮಾರ್ ಮತ್ತು ಜ್ಞಾನೇಶ್ ಕುಮಾರ್ ನೇತೃತ್ವದ ಚುನಾವಣಾ ಆಯೋಗವು ಬಿಜೆಪಿಯ ಒಂದು ಭಾಗವಾಗಿದೆ ಎಂದು ಕಾಂಗ್ರೆಸ್‌ನ ಮಾಣಿಕ್ಕಮ್ ಟ್ಯಾಗೋರ್ ಆರೋಪಿಸಿದರು. ಬಿಹಾರದಲ್ಲಿ ಎಸ್‌ಐಆರ್ ಕುರಿತು ಸಂಸತ್ತಿನಲ್ಲಿ ಭಾರೀ ಪ್ರತಿಭಟನೆ ನಡೆಯುತ್ತಿದೆ.

ಆಪರೇಷನ್ ಸಿಂದೂರ್ ಕುರಿತು ಚರ್ಚೆಗಳನ್ನು ಹೊರತುಪಡಿಸಿ, ಜುಲೈ 21 ರಂದು ಮಳೆಗಾಲದ ಅಧಿವೇಶನ ಪ್ರಾರಂಭವಾದಾಗಿನಿಂದ ಸಂಸತ್ತಿನಲ್ಲಿ ಯಾವುದೇ ವ್ಯವಹಾರ ನಡೆದಿಲ್ಲ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಮಧುಗಿರಿಯಲ್ಲಿ ಬೆಂಬಲಿಗರಿಂದ ಪ್ರತಿಭಟನೆ; ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಆಕ್ರೋಶ

## ರಾಜಣ್ಣ ಅವರಿಗೆ ಮಾಡಿದ ಅವಮಾನವನ್ನು ಖಂಡಿಸಿ ಪ್ರತಿಭಟನೆ



ತುಮಕೂರು: ಕೆಎನ್ ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಿರುವುದನ್ನು ವಿರೋಧಿಸಿ ಅವರ ಬೆಂಬಲಿಗರು ಮಂಗಳವಾರ ತುಮಕೂರು ಜಿಲ್ಲೆಯ ಮಧುಗಿರಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪ್ರತಿಭಟನೆ ನಡೆಸಿ, ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಕೌನ್ಸಿಲರ್ ಗಿರಿಜಾ ಮಂಜುನಾಥ್ ಮಧುಗಿರಿ ಪುರಸಭೆಗೆ ರಾಜೀನಾಮೆ ನೀಡಿದ್ದು, ಇತರರು ರಾಜಣ್ಣಅವರಿಗೆ ಮಾಡಿದ ಅವಮಾನವನ್ನು ಖಂಡಿಸಿ ಪ್ರತಿಭಟನೆ ನಡೆಸಿದರು.

ರಾಜಣ್ಣ ಅವರ ಅಭಿಮಾನಿ ಶಿವಲಿಂಗ ಎಂಬುವವರು ಪೆಟ್ರೋಲ್ ಸುರಿದುಕೊಂಡಿದ್ದು, ಸ್ಥಳದಲ್ಲಿದ್ದವರು ಅವರನ್ನು ತಡೆದು ಸಮಾಧಾನಪಡಿಸಿದ್ದಾರೆ. ರಾಜಣ್ಣ ಅವರ ಬೆಂಬಲಿಗರು ತಮ್ಮ ನಾಯಕನ ಪರವಾಗಿ ಬ್ಯಾನರ್‌ಗಳು ಮತ್ತು ಪೋಸ್ಟರ್‌ಗಳನ್ನು ಹಿಡಿದು ಮೆರವಣಿಗೆ ನಡೆಸಿದರು ಮತ್ತು ಧ್ವನಿವರ್ಧಕಗಳಲ್ಲಿ ಘೋಷಣೆಗಳನ್ನು ಕೂಗಿದರು. ಸರಿಯಾದ ಕಾರಣಗಳಿಲ್ಲದೆ ರಾಜಣ್ಣ ಅವರನ್ನು ಸಂಪುಟದಿಂದ ವಜಾ ಮಾಡಿದ್ದಕ್ಕಾಗಿ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಮತ್ತೆ ಅವರನ್ನು ಸಂಪಟಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ಮಂಗಳವಾರ ಮಧ್ಯಾಹ್ನ ಬಂದ್‌ಗೆ ಕರೆ ನೀಡಿದ್ದ ಅವರು, ಅಂಗಡಿ ಮಾಲೀಕರನ್ನು ದಿನದ ಮಟ್ಟಿಗೆ ಅಂಗಡಿಗಳನ್ನು ಮುಚ್ಚುವಂತೆ ಒತ್ತಾಯಿಸಿದರು. ಪೊಲೀಸರು ಗುಂಪನ್ನು ಸಮಾಧಾನಪಡಿಸಲು ಪ್ರಯತ್ನಿಸಿದರು. ಆದರೆ, ಉದ್ರಿಕ್ತರು ಅಂಗಡಿಗಳ ಬಾಗಿಲು ಮುಚ್ಚುವಂತೆ ಒತ್ತಾಯಿಸಿದರು.

ಪೊಲೀಸರು ಬೃಹತ್ ಜನಸಮೂಹದ ಮುಂದೆ ಅಸಹಾಯಕರಾಗಿ ನಿಂತು ಅವರ ದೌರ್ಜನ್ಯವನ್ನು ನೋಡುತ್ತಿದ್ದರು. ಈ ವೇಳೆ ಕೆಲವು ಅಂಗಡಿಗಳಿಗೂ ಹಾನಿಯಾಯಿತು ಮತ್ತು ಅವುಗಳ ಮಾಲೀಕರು ಮತ್ತು ಸಿಬ್ಬಂದಿಯನ್ನು ಉದ್ರಿಕ್ತ ಗುಂಪು ಹಲ್ಲೆ ನಡೆಸಿತು ಎಂದು ಮೂಲಗಳು ತಿಳಿಸಿವೆ.2024ರ ಲೋಕಸಭಾ ಚುನಾವಣೆಯ ಸಮಯದಲ್ಲಿ ನಡೆದ ಮತ ಕಳ್ಳತನಕ್ಕೆ ರಾಜ್ಯ ಸರ್ಕಾರವನ್ನು ದೂಷಿಸಿದ್ದಕ್ಕಾಗಿ ಕಾಂಗ್ರೆಸ್ ಹೈಕಮಾಂಡ್ ನಿರ್ದೇಶನದ ಮೇರೆಗೆ ರಾಜಣ್ಣ ಅವರನ್ನು ಸಂಪುಟದಿಂದ ತೆಗೆದುಹಾಕಲಾಗಿದೆ ಎಂದು ವರದಿಯಾಗಿದೆ.

- ಮಧುಗಿರಿಯಲ್ಲಿ ರಾಜಣ್ಣ ಬೆಂಬಲಿಗರ ಪ್ರತಿಭಟನೆ
- ಪುರಸಭೆ ಕೌನ್ಸಿಲರ್ ಗಿರಿಜಾ ಮಂಜುನಾಥ್ ರಾಜೀನಾಮೆ
- ಅಭಿಮಾನಿ ಆತ್ಮಹತ್ಯೆಗೆ ಯತ್ನ
- ಬಂದ್‌ಗೆ ಕರೆ, ಅಂಗಡಿಗಳಿಗೆ ಹಾನಿ, ವ್ಯಾಪಾರಿಗಳಿಗೆ ಹಲ್ಲೆ ಆರೋಪ

# ಬುದ್ಧನ ‘ಪ್ರಬುದ್ಧತೆ’ಗೆ ಯಶೋಧರೆಯ ಪರೋಕ್ಷ ಪಾಠ



## ಹೆಣ್ಣಿನ ಧೀಶಕ್ತಿ – ನೆನಪುಗಳ ಬಂಧನ ಕಳೆದು ನಿಜವಾದ ಬೋಧಿಗೆ ಏರಿದ ಬುದ್ಧ

ಬೆಂಗಳೂರು: ಜ್ಞಾನೋದಯದ ನಂತರ ಬುದ್ಧನು ಊರೂರು ಸುತ್ತುತ್ತಾ, ಭಿಕ್ಷಾಟನೆ ಮಾಡುತ್ತಾ, ಪ್ರವಚನವನ್ನು ನೀಡುತ್ತಾ , ಜ್ಞಾನ ಪ್ರಸರಣದಲ್ಲಿ ತೊಡಗಿದ್ದನು. ಒಮ್ಮೆ ಲುಂಬಿನಿಗೂ ಬಂದನು. ಅವನ ಅರಮನೆ ಕೆಲವೇ ಗಜಗಳ ದೂರದಲ್ಲಿದ್ದಾಗ ತನ್ನ ಶಿಷ್ಯನಿಗೆ ಮುಂದಿನ ಬಿಕ್ಷಾಟನೆಗೆ ನೀನು ತೆರಳು ಎಂದೇಳಿ, ತಾನು ನೆಲೆ ನಿಂತಿದ್ದ ಸ್ಥಳಕ್ಕೆ ವಾಪಸ್ಸಾದ. ಶಿಷ್ಯನು ಬುದ್ಧನ ಒಂದು ಕಾಲದ ಅರಮನೆಗೆ ತೆರಳಿ ಭಿಕ್ಷಾಟನೆ ಮಾಡಿದ. ಭಿಕ್ಷೆ ತಂದ ಯಶೋಧರೆ, ನಿಮ್ಮ ಬುದ್ಧ ಪ್ರಭುದ್ದನಲ್ಲ ಎಂದಳು. ಕೋಪಗೊಂಡ ಶಿಷ್ಯ ನೇರವಾಗಿ ಬುದ್ಧನ ಬಳಿ ತೆರಳಿ ನಡೆದದ್ದನ್ನು ತಿಳಿಸಿದ. ಆದರೆ ಬುದ್ಧ ಯಾವುದೇ ಪ್ರತಿಕ್ರಿಯೆ ನೀಡದೆ ಒಂದು ನಿಮಿಷ ಮೌನಿಯಾಗಿ, ನಂತರ ತನ್ನ ಶಿಷ್ಯನಿಗೆ ಹೌದು ನಾನು ಪ್ರಬುದ್ಧನಲ್ಲ ಎಂದ. ಇದರ ಒಳಾರ್ಥ ತಿಳಿಯದ ಶಿಷ್ಯ ಗಲಿಬಿಲಿಗೊಂಡ.

ಕೂಡಲೇ ಮತ್ತೆ ತಪಸ್ಸಿಗೆ ತೆರಳಿದ ಬುದ್ಧ, ಕೆಲ ಕಾಲದ ನಂತರ ಮರಳಿ ವಾಪಸ್ ಬಂದ. ಈ ಬಾರಿ ನೇರವಾಗಿ ಲುಂಬಿನಿ ನಗರಕ್ಕೆ ಬಂದು ತನ್ನ ಅರಮನೆ ಬಾಗಿಲಲ್ಲಿ ನಿಂತು ಬಿಕ್ಷಾಟನೆ ಕೋರಿದ. ಯಶೋಧರೆ ಅವನ ಮುಂದೆ ಬಂದು ನಿಂತು ಬುದ್ಧನ ಮುಖಭಾವವನ್ನು ನೋಡಿದಳು. ಯಾವುದೇ ಚಿತ್ತಚಾಂಚಲ್ಯವಿಲ್ಲದ ಮಂದಸ್ಮಿತದ ಮುಖಭಾವ ಅವಳ ಮನಸ್ಸಿನಲ್ಲಿ ಅಲ್ಲಿಯವರೆಗೂ ಇನ್ನೂ ಹುದುಗಿದ್ದ ಸಿದ್ಧಾರ್ಥನ ಪ್ರತಿಬಿಂಬವನ್ನು ಇಲ್ಲವಾಗಿಸಿ, ಆ ಸ್ಥಳದಲ್ಲಿ ಬುದ್ಧನನ್ನು ಪ್ರತಿಷ್ಠಾಪಿಸಿತು. ಯಶೋಧರೆ ಬುದ್ಧನ ಶಿಷ್ಯನಿಗೆ ಹೇಳಿದಳು, ನಿನ್ನ ಬುದ್ಧ ಇದೀಗ ಪ್ರಭುದ್ಧ ಎಂದು.

ಆನಂತರ ಬುದ್ಧ ತನ್ನ ಶಿಷ್ಯನಿಗೆ, ಯಶೋಧರೆಯ ಮಾತಿನ ಒಳಾರ್ಥವನ್ನು ಬಿಡಿಸಿ ಹೇಳಿದ. ಮೊದಲ ಬಾರಿ ನಾನು ಭಿಕ್ಷಾಟನೆಗೆ ಅರಮನೆಗೆ ತೆರಳದೆ ನಿನ್ನನ್ನು ಕಳಿಸಿದ್ದಕ್ಕೆ ಕಾರಣ, ಎಲ್ಲಿ ಮತ್ತೆ ಹಳೆಯ ನೆನಪುಗಳು ನನ್ನನ್ನು ಕಾಡುತ್ತವೆಯೋ ಎಂಬ ಕಾರಣಕ್ಕಾಗಿ. ಆ ರೀತಿ ಕಾಡಿದರೆ ನಾನೇಗೆ ಬುದ್ಧನಾಗುತ್ತೇನೆ ಎಂಬುದು ಆ ಹೆಣ್ಣಿನ ತರ್ಕ. ಹಾಗಾಗಿ ನನ್ನನ್ನು ಅವರು ಅಪ್ರಬುದ್ಧ ಎಂದರು. ಎರಡನೇ ಬಾರಿ ನಾನು ನೇರವಾಗಿ ಅರಮನೆ ಪ್ರವೇಶಿಸಿದೆ. ನನಗೆ ಯಾವ ಹಳೆಯ ನೆನಪುಗಳು ಕಾಡಲಿಲ್ಲ.

ಎಲ್ಲಾ ಮನೆಯಲ್ಲಿ ಭಿಕ್ಷೆ ನೀಡುವ ಮಾತೆಯರಂತೆಯೇ ಆ ಅರಮನೆಯವರು ಆಗಿದ್ದರು. ಹಾಗಾಗಿಯೇ ಇದೀಗ ಅವರು ನನ್ನನ್ನು ಪ್ರಬುದ್ಧರು ಎಂದರು ಎಂದು ವಿವರಿಸಿದ. ಯಶೋಧರೆಯ ಬಗೆಗಿನ ಕೋಪ ಶಿಷ್ಯನಲ್ಲಿ ಮಾಯವಾಗಿ, ಗೌರವಧಾರ ಮೂಡಿತು. ಬುದ್ಧನನ್ನೇ ಪ್ರಬುದ್ಧಗೊಳಿಸಿದ ಹೆಗ್ಗಳಿಕೆ ಯಶೋಧರೆಯದಾಯಿತು. ಇದು ಹೆಣ್ಣಿನ ಧೀಶಕ್ತಿ ಎಂದು ಲೇಖಕ ಚಿಂತಕ ಅಂಕಣಕಾರ ಮಣ್ಣೆಮೋಹನ್ ತಿಳಿಸಿದರು.

## ಸೆಲ್ಫಿ ಕ್ಲಿಕ್ಕಿಸಲು ಬಂದ ಅಭಿಮಾನಿಯನ್ನು ತಳ್ಳಿದ ಸಂಸದೆಜಯಾ ಬಚ್ಚನ್:

# ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಯ್ತು ವಿಡಿಯೋ

ನವದೆಹಲಿ: ಹಿರಿಯ ನಟಿ ಮತ್ತು ಸಮಾಜವಾದಿ ಪಕ್ಷದ ನಾಯಕಿ ಜಯಾ ಬಚ್ಚನ್ ಅವರ ಜೊತೆ ಸೆಲ್ಫಿ ತೆಗೆದುಕೊಳ್ಳಲು ಪ್ರಯತ್ನಿಸುತ್ತಿದ್ದ ವ್ಯಕ್ತಿಯನ್ನು ತಳ್ಳಿರುವ ವಿಡಿಯೋ ಮತ್ತೊಮ್ಮೆ ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡಿದೆ.

ದೆಹಲಿಯ ಕಾನ್ಸ್ಟಿಟ್ಯೂಷನ್ ಕ್ಲಬ್ ಆಫ್ ಇಂಡಿಯಾದಲ್ಲಿ ಈ ಘಟನೆ ನಡೆದಿದೆ ಎಂದು ವರದಿಯಾಗಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ಭಾರತೀಯ ಸೇನೆ ನಡೆಸಿದ ಕಾರ್ಯಾಚರಣೆಗೆ ಆಪರೇಷನ್ ಸಿಂಧೂರ್ ಎಂಬ ಹೆಸರು ನೀಡಿದ್ದನ್ನು ಪ್ರಶ್ನಿಸುವ ಮೂಲಕ ಜಯಾ ಬಚ್ಚನ್ ಇತ್ತೀಚೆಗೆ ವಿವಾದ ಸೃಷ್ಟಿಸಿದ್ದರು

ಸದನದಲ್ಲಿ ಆಪರೇಷನ್ ಸಿಂಧೂರ್ ಕುರಿತು ಆಡಳಿತ ಪಕ್ಷದ ಸಂಸದರು ತಮ್ಮ ಭಾಷಣಕ್ಕೆ ಅಡ್ಡಿಪಡಿಸಿದಾಗ ಬಚ್ಚನ್ ಕೂಡ ಅಸಮಾಧಾನಗೊಂಡರು. “ನೀವು ಮಾತನಾಡಿ ಅಥವಾ ನಾನು ಮಾತನಾಡುತ್ತೇನೆ. ನೀವು ಮಾತನಾಡುವಾಗ, ನಾನು ಅಡ್ಡಿಪಡಿಸುವುದಿಲ್ಲ. ಮಹಿಳೆ ಮಾತನಾಡುವಾಗ, ನಾನು ಎಂದಿಗೂ ಅಡ್ಡಿಪಡಿಸುವುದಿಲ್ಲ. ಆದ್ದರಿಂದ ದಯವಿಟ್ಟು ನಿಮ್ಮ ನಾಲಿಗೆಯನ್ನು ಗಮನದಲ್ಲಿಟ್ಟುಕೊಳ್ಳಿ” ಎಂದು ಆಡಳಿತ ಪಕ್ಷದ ನಾಯಕರು ಹೇಳಿದರು.

# ಧರ್ಮಸ್ಥಳ ಸಮಾಧಿ ಪ್ರಕರಣ: 13ನೇ ಸ್ಥಳದಲ್ಲಿ ಜಿಪಿಆರ್ ತಂತ್ರಜ್ಞಾನದಿಂದ ಎಸ್.ಐ.ಟಿ ತೀವ್ರ ಶೋಧ



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂಳಲಾಗಿದೆ ಎಂಬ ಆರೋಪದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ(ಎಸ್‌ಐಟಿ) ‘ಸ್ಪಾಟ್ ಸಂಖ್ಯೆ 13’ರಲ್ಲಿ ಗ್ರೌಂಡ್ ಪೆನೆಟ್ರೇಟಿಂಗ್ ರಾಡಾರ್(ಜಿಪಿಆರ್) ತಂತ್ರಜ್ಞಾನ ಬಳಸಿ ತೀವ್ರ ಶೋಧ ನಡೆಸುತ್ತಿದೆ. ಮೂಲಗಳ ಪ್ರಕಾರ, ಸ್ಥಳವನ್ನು ಸ್ಕ್ಯಾನ್ ಮಾಡಲು ಮತ್ತು ಭೂಮಿಯಲ್ಲಿ ಹೂತುಹೋಗಿರುವ ಯಾವುದೇ ವಸ್ತುಗಳನ್ನು ಪತ್ತೆಹಚ್ಚಲು ಎಸ್‌ಐಟಿ ರಾಡಾರ್ ಇಮೇಜಿಂಗ್ ಹೊಂದಿದ ಹೆಚ್ಚಿನ ಸಾಮರ್ಥ್ಯದ ಡ್ರೋನ್ ಅನ್ನು ಸಹ ನಿಯೋಜಿಸಿದೆ.

- ಧರ್ಮಸ್ಥಳ ಸಾಮೂಹಿಕ ಸಮಾಧಿ ಪ್ರಕರಣದಲ್ಲಿ 13ನೇ ಸ್ಥಳದಲ್ಲಿ ಜಿಪಿಆರ್ ಸ್ಕ್ಯಾನಿಂಗ್
- ರಾಡಾರ್ ಇಮೇಜಿಂಗ್ ಹೊಂದಿದ ಡ್ರೋನ್ ಬಳಕೆ
- 60 ಸದಸ್ಯರ ತಂಡ, ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೊಹಂತಿ ನೇತೃತ್ವ
- ದೂರುದಾರರ ಸಮ್ಮುಖದಲ್ಲಿ ಪಾರದರ್ಶಕ ಕಾರ್ಯಾಚರಣೆ
- ಹಿಂದಿನ ಅಗೆತೆಯಲ್ಲಿ ಕೇವಲ ಒಂದು ಸ್ಥಳದಲ್ಲಿ ಅಸ್ಥಿಪಂಜರ ಪತ್ತೆ
- ಉಳಿದ ಸ್ಥಳಗಳಲ್ಲೂ ಮತ್ತೆ ಶೋಧ ನಡೆಸುವ ಸಾಧ್ಯತೆ

## ಡ್ರೋನ್, ರಾಡಾರ್ ಇಮೇಜಿಂಗ್ ಬಳಕೆ – ದೂರುದಾರರ ಸಮ್ಮುಖದಲ್ಲಿ ಕಾರ್ಯಾಚರಣೆ

ಸಾಕ್ಷಿ ದೂರುದಾರ ಗುರುತಿಸಿದ 13ನೇ ಸ್ಥಳದ ಸುತ್ತ ಮಾತ್ರವಲ್ಲದೇ, ನೇತ್ರಾವತಿ ಅಜಿಕುರಿ ರಸ್ತೆಯ ಸುಮಾರು ನೂರು ಮೀಟರ್ ಗೂ ಅಧಿಕ ದೂರದ ವರೆಗೂ ರಸ್ತೆ ಬದಿಯಲ್ಲಿ ಜಿಪಿಆರ್ ಸ್ಕ್ಯಾನಿಂಗ್ ಕಾರ್ಯ ನಡೆಸಲಾಗಿದೆ. ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೊಹಂತಿ ನೇತೃತ್ವದಲ್ಲಿ ಪರಿಶೀಲನೆ ನಡೆಸಲಾಗುತ್ತಿದ್ದು , ಎಸ್‌ಐಟಿ ಹಿರಿಯ ಅಧಿಕಾರಿಗಳು, ಪುತ್ತೂರು ಸಹಾಯಕ ಆಯುಕ್ತ ಸ್ಟೆಲ್ಲಾ ವರ್ಗೀಸ್ ಹಾಗೂ ಇತರ ತಜ್ಞ ಅಧಿಕಾರಿಗಳ ಸುಮಾರು 60 ಮಂದಿಯ ತಂಡ 13ನೇ ಸ್ಥಳದಲ್ಲಿ ಕಾರ್ಯಾಚರಣೆ ನಡೆಸುತ್ತಿದೆ. ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ದೂರುದಾರರು ಮತ್ತು ಅವರ ವಕೀಲರ ಸಮ್ಮುಖದಲ್ಲಿ ಜಿಪಿಆರ್ ಪರೀಕ್ಷೆಯನ್ನು ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಕ್ರಮವು ಪ್ರಕರಣಕ್ಕೆ ಸಂಬಂಧಿಸಿದ ನಿರ್ಣಾಯಕ ಸಾಕ್ಷ್ಯಗಳನ್ನು ಪತ್ತೆಹಚ್ಚಲು ಸಹಾಯ ಮಾಡುತ್ತದೆ ಎಂದು ನಿರೀಕ್ಷಿಸಲಾಗಿದೆ. ಅನಾಮಿಕ ದೂರುದಾರ ಬಹಳ ಸ್ಪಷ್ಟವಾಗಿ ಹೆಣ ಹೂತಿದ್ದೇನೆ ಎಂದು ಹೇಳಿದ ಕಾರಣಕ್ಕಾಗಿ ಎಸ್ ಐಟಿಯು 12 ಸ್ಥಳಗಳನ್ನು ಅಗೆದಿದೆ. ಆದರೆ ಅಸ್ಥಿಪಂಜರದ ಕುರುಹು ಕೇವಲ 1 ಕಡೆ ಮಾತ್ರ ಸಿಕ್ಕಿದೆ. ಈ ಎಲ್ಲಾ ಪಾಯಿಂಟ್ ಗಳನ್ನು ಸದ್ಯ ಇನ್ನೂ ಕೂಡಾ ರಕ್ಷಿಸಲಾಗಿದೆ.

ಹೀಗಾಗಿ ಉಳಿದೆಡೆ ಶವ ಪತ್ತೆಯಾಗದ ಕಾರಣ ದೂರುದಾರನ ಪರ ವಕೀಲರು ಜಿಪಿಆರ್ ಬಳಸುವಂತೆ ಒತ್ತಾಯಿಸಿದ್ದಾರೆ. ಹೀಗಾಗಿ 13 ನೇ ಪಾಯಿಂಟ್ ಸೇರಿದಂತೆ ಉಳಿದ 12 ಸ್ಪಾಟ್ ಗಳಲ್ಲೂ ಮತ್ತೊಮ್ಮೆ ಅಸ್ಥಿಪಂಜರದ ಕುರುಹು ಶೋಧ ಮಾಡುವ ಸಾಧ್ಯತೆ ಇದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.